ಅಲೆಮಾರಿ ಜನಾಂಗದವರಿಗೆ ಸೌಲಭ್ಯ ನೀಡುವುದು

938 (818) ಶ್ರೀ ಸುರೇಶ್ ಬಾಬು (ಚಿಕ್ಕನಾಯಕನಹಳ್ಳಿ ಕ್ಷೇತ್ರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಗುರುತಿಸಲಾಗಿರುವ ಅಲೆಮಾರಿ ಜನಾಂಗದ ಕುಟುಂಬಗಳೆಷ್ಟು? (ಕುಟುಂಬದ ಪೂರ್ಣ ವಿವರ ನೀಡುವುದು);

ಆ) ಈ ಜನಾಂಗದವರಿಗೆ ಇದುವರೆಗೆ ಸರ್ಕಾರದಿಂದ ನೀಡಿರುವ ಸೌಲಭ್ಯಗಳೇನು?

ಇ) ಎಷ್ಟು ಕುಟುಂಬಕ್ಕೆ ವಸತಿ ಸೌಕರ್ಯ ನೀಡಲಾಗಿದೆ; (ಮಾಹಿತಿ ನೀಡುವುದು);

ಈ) ಅಲೆಮಾರಿ ಜನಾಂಗದ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಯಾವ ಸೌಲಭ್ಯ ನೀಡಲಾಗುತ್ತಿದೆ;

ಉ) ಈ ಕಾರ್ಯಕ್ರಮಕ್ಕಾಗಿ ಇದುವರೆಗೆ ಮಾಡಿರುವ ವೆಚ್ಚದ ಮೊಬಲಗೆಷ್ಟು? (ಪೂರ್ಣ ವಿವರ ನೀಡುವುದು);

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಅಲೆಮಾರಿ ಕುಟುಂಬದವರನ್ನೊಳಗೊಂಡ ಹಿಂದುಳಿದ ವರ್ಗಗಳ ಸಮೀಕ್ಷೆಯಾಗಿರುವುದಿಲ್ಲವಾದ್ದರಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇವರ ಕುಟುಂಬಗಳ ನಿರ್ದಿಷ್ಟ ಸಂಖ್ಯೆಯ ವಿವರಗಳು ಲಭ್ಯವಿರುವುದಿಲ್ಲ.

ಆ) ಅಲೆಮಾರಿಗಳು ಹಿಂದುಳಿದ ವರ್ಗಗಳ ಪ್ರವರ್ಗ-1 ರ ಪಟ್ಟಿಯಲ್ಲಿದ್ದು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಜಾರಿಯಾಗುತ್ತಿರುವ ಕೆಳಕಂಡ ಸೌಲಭ್ಯಗಳನ್ನು ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ನೀಡಲಾಗುತ್ತಿದೆ.

1) ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ
2) ವಿದ್ಯಾರ್ಥಿ ವೇತನ ಸೌಲಭ್ಯ (ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ)
3) ಶುಲ್ಕ ಮರು ಪಾವತಿ
4) ಹೆಚ್ಚುವರಿ ಬೋಜನಾ ವೆಚ್ಚದ ಸೌಲಭ್ಯ

5) ಅರ್ಹತಾ ವಿದ್ಯಾರ್ಥಿ ವೇತನ
6) ಪ್ರೋತ್ಸಾಹಧನ ಮಂಜೂರಾತಿ
7) ನೇರ ಸಾಲ ಸೌಲಭ್ಯ

ಇ) 2009–10ನೇ ಸಾಲಿನಲ್ಲಿ ಈ ತಾಲ್ಲೂಕಿನ ಲಿಂಗದಹಳ್ಳಿ ಗೊಲ್ಲರ ಹಟ್ಟಿಯಲ್ಲಿ 30 ಫಲಾನುಭವಿಗಳಿಗೆ ಮನೆ ನಿರ್ಮಿಸುವ ಪ್ರಸ್ತಾವನೆ ಇದ್ದು ಈ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಈ) 2009–10ನೇ ಸಾಲಿನಲ್ಲಿ ಅಲೆಮಾರಿ ಜನಾಂಗದ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಈ ಕೆಳಕಂಡ ಸೌಲಭ್ಯ ಗಳನ್ನು ನೀಡಲಾಗುತ್ತಿದೆ.

1) ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿ ವೇತನ
2) ಅಲೆಮಾರಿ ಜನಾಂಗದ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಹಧನ
3) ಹೆಚ್ಚುವರಿ ಊಟ ಮತ್ತು ವಸತಿ ಸೌಕರ್ಯ
4) ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ
5) ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ನೀಡಿಕೆ
6) ಶುಲ್ಕ ಮರು ಪಾವತಿ

ಉ) ಈ ಕಾರ್ಯಕ್ರಮಗಳಿಗೆ 2009–10ನೇ ಸಾಲಿಗೆ ಈ ಕೆಳಕಂಡಂತೆ ವೆಚ್ಚ ಮಾಡಲಾಗಿರುತ್ತದೆ.

ಕ್ರ ಸಂ.	ಕಾರ್ಯಕ್ರಮದ ಹೆಸರು	ಖರ್ಚು ಮಾಡಿದ ಮೊತ್ತ	ಫಲಾನು ಭವಿಗಳ ಸಂಖ್ಯೆ
1.	ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿ ವೇತನ	16000/–	14

2.	ಅಲೆಮಾರಿ ಜನಾಂಗದ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ	20060/-	10
3.	ಹೆಚ್ಚುವರಿ ಊಟ ಮತ್ತು ವಸತಿ ಸೌಕರ್ಯ	108200/-	66
4.	ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ	39575/-	211
5.	ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ	352050/-	50
	ಒಟ್ಟು	**535825/-**	**351**

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಹುಳಿಯಾರು ಮತ್ತು ಬುಕ್ಕಾಪಟ್ಟಣ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು

939 (819) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಹುಳಿಯಾರು ಮತ್ತು ಬುಕ್ಕಾಪಟ್ಟಣ ಹೋಬಳಿ ಕೇಂದ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಇದುವರೆಗೆ ಮೇಲ್ದರ್ಜೆಗೇರಿಸಲು ಇಲಾಖೆಯಿಂದ ಕೈಗೊಂಡಿರುವ ಕ್ರಮಗಳೇನು;

ಇ) ಈ ವರ್ಷದಲ್ಲಿಯೇ ಮೇಲ್ದರ್ಜೆಗೇರಿಸಲು ಸಾಧ್ಯವಿದೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ವ್ಯಾಪ್ತಿಯಡಿ 2 ತಾಲ್ಲೂಕುಗಳು ಇದ್ದು, ಚಿಕ್ಕನಾಯಕನಹಳ್ಳಿ ಗ್ರಾಮೀಣ ಜನಸಂಖ್ಯೆ 2001 ರ ಜನಗಣತಿ ಪ್ರಕಾರ 1,87,179 ಆಗಿದ್ದು, ಮಾರ್ಗಸೂಚಿಗಳ ಪ್ರಕಾರ ಒಂದು ಸಮುದಾಯ